# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 272 |
| 2 | ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 18–07–2024 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇದ್ದು ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರಗಳನ್ನು ಅನುಬಂಧ ದಲ್ಲಿ ನೀಡಿದೆ. |
| ಆ) | ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಎಷ್ಟು ಕೊಳವೆ ಬಾವಿಗಳನ್ನು ಕೊರೆಸಲಾಗಿದೆ; | (see table below) |
| ಇ) | ಸ್ಮಾರ್ಟ್‌ಸಿಟಿ ಯೋಜನೆಯಲ್ಲಿ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸೌಲಭ್ಯ ಒದಗಿಸಲು ಕೈಗೊಂಡ ಕ್ರಮಗಳೇನು; | ಬೆಂಗಳೂರು ಸ್ಮಾರ್ಟ್ ಸಿಟಿ ಲಿಮಿಟೆಡ್ ವತಿಯಿಂದ ಸ್ಮಾರ್ಟ್ ಟೆಂಡರ್ ಶ್ಯೂರ್ ಮಾರ್ಗಸೂಚಿಯಂತೆ 32 ರಸ್ತೆಗಳಲ್ಲಿನ ಒಟ್ಟು 27.80 ಕಿ.ಮೀ ಉದ್ದಕ್ಕೆ ರಸ್ತೆಯ ಎರಡೂ ಬದಿಗಳಲ್ಲಿ ಪಾದಚಾರಿ ಮಾರ್ಗದ ಅಡಿಯಲ್ಲಿ ಕುಡಿಯುವ ನೀರಿನ ಕೊಳವೆಗಳನ್ನು ಅಳವಡಿಸಿ, ಸಾರ್ವಜನಿಕರಿಗೆ ನೀರಿನ ಸೌಲಭ್ಯವನ್ನು ಒದಗಿಸಲಾಗಿರುತ್ತದೆ. |
| ಈ) | ಗಾರ್ಡನ್ ಸಿಟಿ ಈಗ ಟ್ಯಾಂಕರ್ ಸಿಟಿಯಾಗಿ ಬದಲಾಗುತ್ತಿರುವ ಕುರಿತು ಸರ್ಕಾರದ ನಿಲುವೇನು; | ಮೇಲೆ ತಿಳಿಸಿರುವಂತೆ ನೀರಿನ ಬವಣೆಯನ್ನು ತಪ್ಪಿಸಲು ಜಾಗೃತ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. |

**NO'S OF BOREWELLS DRILLED IN BBMP** (ಆ)

| SL. NO | ZONES | NO'S OF BOREWELLS |
|---|---|---|
| 1 | EAST | 495 |
| 2 | WEST | 243 |
| 3 | SOUTH | 43 |
| 4 | BOMMANAHALLI | 132 |
| 5 | DASARAHALLI | 25 |
| 6 | YELAHANKA | 295 |
| 7 | MAHADEVAPURA | 426 |
| 8 | RR NAGARA | 165 |
| | **TOTAL** | **1824** |

**ನಅಇ 330 ಎಂಎನ್‌ವೈ 2024**

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿ

**ಬೃ[redacted] ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರ**

# ಅನುಬಂಧ

- ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 15ನೇ ಹಣಕಾಸು ಆಯೋಗದ ಅನುದಾನದಡಿಯಲ್ಲಿ 2022–23ಕ್ಕೆ ನೀರು ಸರಬರಾಜು, ನೈರ್ಮಲ್ಯ ಮತ್ತು ಘನತ್ಯಾಜ್ಯ ನಿರ್ವಹಣೆಗಾಗಿನ ಕ್ರಿಯಾಯೋಜನೆಯಲ್ಲಿ (Micro Level Action Plan) "Recharge of existing bore wells and drilling of new bore well and creation of recharge pits for ground water in all 8 zones of BBMP" ಕಾಮಗಾರಿಗೆ ರೂ.20.00 ಕೋಟಿಗಳು ಮತ್ತು "Supply of drinking water to public in BBMP during summer–2024" ಕಾಮಗಾರಿಗೆ ರೂ.20.00 ಕೋಟಿಗಳ ಅನುದಾನ ನಿಗದಿಪಡಿಸಲಾಗಿದೆ.
- ಬೊಮ್ಮನಹಳ್ಳಿ, ಮಹದೇವಪುರ, ರಾಜರಾಜೇಶ್ವರಿ ನಗರ ಹಾಗೂ ಯಲಹಂಕ ವಲಯಗಳಿಗೆ ಪ್ರತೀ ವಲಯಕ್ಕೆ ರೂ.9.00 ಕೋಟಿಗಳನ್ನು ಹಾಗೂ ದಾಸರಹಳ್ಳಿ ವಲಯಕ್ಕೆ ರೂ.5.00 ಕೋಟಿಗಳ ಒಟ್ಟಾರೆ ರೂ.41.00 ಕೋಟಿಗಳ ಅನುದಾನವನ್ನು ಬಿಬಿಎಂಪಿ ಆಯವ್ಯಯದಲ್ಲಿ ನೀರು ಸರಬರಾಜು ವಾರ್ಷಿಕ ನಿರ್ವಹಣೆ ಹಾಗೂ ದುರಸ್ಥಿ ಕಾಮಗಾರಿಗಳಿಗೆ ಲೆಕ್ಕಶೀರ್ಷಿಕೆ 05–220801/ಪಿ1802 ಅಡಿ ಒದಗಿಸಲಾಗಿದೆ.
- ಮುಂದುವರೆದಂತೆ 15ನೇ ಹಣಕಾಸು ಆಯೋಗದ ನೀರು ಸರಬರಾಜು ಮತ್ತು ಒಳಚರಂಡಿ ಅನುದಾನದಲ್ಲಿ ಹೊರವಲಯಗಳಿಗೆ ರೂ.72.6 ಕೋಟಿಗಳನ್ನು ಮತ್ತು ಒಳವಲಯಗಳಿಗೆ ರೂ.25.05 ಕೋಟಿಗಳನ್ನು ನೀಡಲಾಗಿದ್ದು, ಒಟ್ಟು ರೂ.97.65 ಕೋಟಿಗಳನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನೀರಿನ ಸೌಕರ್ಯ ಒದಗಿಸಲಾಗಿದೆ.
- ಅಲ್ಲದೆ ನೀರು ಪೋಲು ತಡೆಯಲು ಏರೇಟರ್‌ಗಳ ಅಳವಡಿಕೆ, ಅಂತರ್ಜಲ ವೃದ್ಧಿಗೆ ಮಳೆನೀರುಕೊಯ್ಲು ಪದ್ಧತಿ ಅಳವಡಿಕೆ ಮೊದಲಾದ ಸಾರ್ವಜನಿಕ ಸಹಭಾಗಿತ್ವದ ಕ್ರಮಗಳನ್ನು ಬೆಂಗಳೂರು ಜಲಮಂಡಳಿಯಿಂದ ಕೈಗೊಳ್ಳಲಾಗಿದೆ.
- ಜಲಮಂಡಳಿಯ ಸುಪರ್ದಿಯಲ್ಲಿರುವ ಸುಮಾರು 10,995 ಕೊಳವೆ ಬಾವಿಗಳನ್ನು ಸುಸ್ತಿತಿಯಲ್ಲಿಟ್ಟು ಇದರ ಮೂಲಕ ನಗರದ ಜನರಿಗೆ ನೀರು ಸರಬರಾಜು ಮಾಡಲಾಗುತ್ತಿದೆ.
- ಕಡಿಮೆ ಇಳುವರಿ ಇರುವ ಕೊಳವೆ ಬಾವಿಗಳನ್ನು ಗುರುತಿಸಿ ಅವುಗಳನ್ನು ಮರು ಡ್ರಿಲ್ಲಿಂಗ್ ಮಾಡಿ ನೀರಿನ ಇಳುವರಿಯನ್ನು ಹೆಚ್ಚಿಸಲು ಕ್ರಮವಹಿಸಲಾಗುತ್ತಿದೆ.
- ಜಲಮಂಡಳಿಯ ಒಟ್ಟು 68 ನೀರಿನ ಟ್ಯಾಂಕರ್‌ಗಳನ್ನು ಸುಸ್ಥಿತಿಯಲ್ಲಿಟ್ಟು, ನೀರಿನ ಬವಣೆ ಇರುವ ಪ್ರದೇಶಗಳಲ್ಲಿ ಕುಡಿಯುವ ನೀರನ್ನು ಸರಬರಾಜು ಮಾಡಲಾಗುತ್ತಿದೆ.
- ನೀರಿನ ಬವಣೆ ನೀಗಿಸುವ ಸಲುವಾಗಿ ಜಲಮಂಡಳಿಯ ವಾಟರ್ ಟ್ಯಾಂಕರ್‌ಗಳನ್ನು ಹೊರತುಪಡಿಸಿ ಹೆಚ್ಚುವರಿಯಾಗಿ ಖಾಸಗಿ ನೀರಿನ ಟ್ಯಾಂಕರ್‌ಗಳ ಮುಖಾಂತರ ನೀರನ್ನು ಸರಬರಾಜು ಮಾಡಲು ಉದ್ದೇಶಿಸಲಾಗಿದೆ.

. . .2/-

- ಬೇಸಿಗೆಯಲ್ಲಿ, ಬೆಂಗಳೂರು ನಗರದಲ್ಲಿನ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಜಿಲ್ಲಾಧಿಕಾರಿ, ಬೆಂಗಳೂರು ನಗರ ಜಿಲ್ಲೆ ರವರಿಗೆ ಪತ್ರ ಬರೆದು ಸದರಿಯವರ ಸುಪರ್ದಿಯಲ್ಲಿರುವ ನೀರಿನ ಟ್ಯಾಂಕರ್‌ಗಳನ್ನು ತಾತ್ಕಾಲಿಕವಾಗಿ 4 ತಿಂಗಳ ಕಾಲಾವಧಿಯವರೆಗೆ ಜಲಮಂಡಳಿಗೆ ಹಸ್ತಾಂತರಿಸಲು ಕೋರಲಾಗಿದೆ.
- ಕಾವೇರಿ ಮೂಲದಿಂದ ಬೆಂಗಳೂರು ನಗರಕ್ಕೆ ಕುಡಿಯುವ ನೀರು ಸರಬರಾಜು ಮಾಡುವ ಸಲುವಾಗಿ ಪ್ರತಿದಿನ 24x7 ಯಾವುದೇ ಅಡಚಣೆ ಇಲ್ಲದಂತೆ ವಿದ್ಯುತ್ ಸರಬರಾಜು ಮಾಡಲು ಕೆ.ಪಿ.ಟಿ.ಸಿ.ಎಲ್. ಇಲಾಖೆಗೆ ಪತ್ರ ವ್ಯವಹಾರ ಮಾಡಲಾಗಿದೆ.
- ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುವ ಬಹುಮಹಡಿ ಕಟ್ಟಡ, ವಾಣಿಜ್ಯ ಕಟ್ಟಡ ಹಾಗೂ ನಿರ್ಮಾಣ ಹಂತದಲ್ಲಿರುವ ಕಟ್ಟಡಗಳಿಗೆ ಸಂಸ್ಕರಿಸಿದ ನೀರನ್ನು (Treated Water) ಅತೀ ಹೆಚ್ಚಾಗಿ ಉಪಯೋಗಿಸಲು ಉತ್ತೇಜನ ನೀಡಲಾಗಿದೆ.

******